ಶ್ರೀ ಆರ್. ರೋಷನ್ ಬೇಗ್ (ಸಣ್ಣ ಪ್ರಮಾಣದ ಕೈಗಾರಿಕಾ ಹಾಗೂ ಹಜ್ ಸಚಿವರು) :

ಅ) ಕಳೆದ 3 ವರ್ಷದ ಅವಧಿಯಲ್ಲಿ ಬೀದರ್ : ಬಾಗಲಕೋಟೆ ಜಿಲ್ಲೆಯ ಕೈಗಾರಿಕೆಗಳಿಗೆ ಸಹಾಯಧನ ಮಂಜೂರಾತಿ ಮಾಡಿದ ವಿವರ ಈ ಕೆಳಗಿನಂತಿವೆ.

(ರೂ. ಲಕ್ಷಗಳಲ್ಲಿ)

ಜಿಲ್ಲೆ	ಘಟಕಗಳ ಸಂಖ್ಯೆ	ಮಂಜೂರಾದ ಮೊತ್ತ
1. ಬೀದರ್	507	484.88
2. ಬಾಗಲಕೋಟೆ	391	699.09

ಆ) ಇವುಗಳ ಪೈಕಿ ಸಹಾಯಧನ ಬಿಡುಗಡೆಯಾದ ವಿವರ ಈ ಕೆಳಗಿನಂತಿದೆ.

(ರೂ. ಲಕ್ಷಗಳಲ್ಲಿ)

ಜಿಲ್ಲೆ	ಘಟಕಗಳ ಸಂಖ್ಯೆ	ಬಿಡುಗಡೆ ಮೊತ್ತ
1. ಬೀದರ್	69	25.07 (ಶೇ. 50)
2. ಬಾಗಲಕೋಟೆ	31	44.46 (ಶೇ. 50)
ಬಾಕಿ ಇರುವ ಸಹಾಯಧನದ ವಿವರ :		
1. ಬೀದರ್	507	459.81
2. ಬಾಗಲಕೋಟೆ	391	654.63

ಇ) ಸಹಾಯ ಧನವನ್ನು ಶೀಘ್ರವಾಗಿ ಬಿಡುಗಡೆ ಮಾಡುವ ಬಗ್ಗೆ ಹಣಕಾಸು ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಅನುದಾನದ ಲಭ್ಯತೆಯ ಆಧಾರದ ಮೇಲೆ ಹಾಗೂ ಜೇಷ್ಠತಾನುಸಾರ ಸಹಾಯ ಧನವನ್ನು ಬಿಡುಗಡೆ ಮಾಡಲಾಗುವುದು. ಬಿಡುಗಡೆ ಮಾಡುವ ಸಂದರ್ಭದಲ್ಲಿ ಹಿಂದುಳಿದ ಜಿಲ್ಲೆಗಳಿಗೆ ಆದ್ಯತೆ ನೀಡುವ ಬಗ್ಗೆ ಸರ್ಕಾರವು ಪರಿಶೀಲಿಸುತ್ತಿದೆ.

ಬೀದರ್ ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳು ಮತ್ತು ಪಶು ಚಿಕಿತ್ಸಾಲಯಗಳು

1144 (1488) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಇರುವ ಪಶುವೈದ್ಯ ಆಸ್ಪತ್ರೆಗಳು ಹಾಗೂ ಪಶುಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ಮತ್ತು ಇವು ಯಾವುವು ; (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು) ?

ಆ) ಕಳೆದ ಮೂರು ವರ್ಷಗಳಲ್ಲಿ (ದಿನಾಂಕ 31.01.2003 ರವರೆವಿಗೆ) ಜಿಲ್ಲೆಯ ಯಾವ ಯಾವ ಗ್ರಾಮಗಳಲ್ಲಿ ಪಶುವೈದ್ಯ ಆಸ್ಪತ್ರೆ ಹಾಗೂ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸಲಾಗಿದೆ ಹಾಗೂ ಇದೇ ಅವಧಿಯಲ್ಲಿ ಯಾವ ಯಾವ ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ ?

ಇ) ಮೇಲ್ಕಂಡ ಅವಧಿಯಲ್ಲಿ ಯಾವ ಯಾವ ಗ್ರಾಮಗಳಲ್ಲಿ ಹೊಸ ಆಸ್ಪತ್ರೆಗಳು ಹಾಗೂ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸಬೇಕೆಂದು ಪ್ರಸ್ತಾವನೆ ಸರ್ಕಾರದ ಮುಂದಿತ್ತು ; ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಯಾವ ಯಾವ ಗ್ರಾಮಗಳಲ್ಲಿ ಹೊಸ ಪಶುಆಸ್ಪತ್ರೆ ಹಾಗೂ ಪಶುಚಿಕಿತ್ಸಾಲಯಗಳನ್ನು ಪ್ರಾರಂಭಿಸಲಾಗುವುದು ?

ಈ) ಜಿಲ್ಲೆಯ ಬಹುತೇಕ ಪಶುವೈದ್ಯ ಆಸ್ಪತ್ರೆ ಹಾಗೂ ಪಶುಚಿಕಿತ್ಸಾಲಯಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಕೊರತೆ ಇರುವುದು ನಿಜವಲ್ಲವೇ (ಪೂರ್ಣ ವಿವರಗಳನ್ನು ಒದಗಿಸುವುದು) ?

ಉ) ಈ ಕೊರತೆಯನ್ನು ನೀಗಲು ಸರ್ಕಾರದ ಮುಂದಿರುವ ಕ್ರಮಗಳೇನು ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) 5 ಪಶುಆಸ್ಪತ್ರೆಗಳು : 41 ಪಶುಚಿಕಿತ್ಸಾಲಯಗಳು ಜಿಲ್ಲೆಯಲ್ಲಿ ಕೆಲಸ ನಿರ್ವಹಿಸುತ್ತಿವೆ. ಕ್ಷೇತ್ರವಾರು ಮಾಹಿತಿ ಅನುಬಂಧ-1 ರಲ್ಲಿ ನೀಡಲಾಗಿದೆ.

ಆ) ಹೊಸ ಪಶುಆಸ್ಪತ್ರೆಗಳನ್ನಾಗಲೀ ಪಶುಚಿಕಿತ್ಸಾಲಯಗಳನ್ನಾಗಲೀ ಆರಂಭಿಸಲಾಗಿಲ್ಲ. ಆದಾಗ್ಯೂ 11 ಪ್ರಾಥಮಿಕ ಪಶು ಚಿಕಿತ್ಸಾಲಯಗಳನ್ನು ಪಶುಚಿಕಿತ್ಸಾಲಯಗಳನ್ನಾಗಿ ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಮೇಲ್ದರ್ಜೆಗೇರಿಸಲಾಗಿದೆ. ಪಶುಚಿಕಿತ್ಸಾಲಯಗಳನ್ನು ಪಶುಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಸರ್ಕಾರದ ಮುಂದೆ ಇರುವುದಿಲ್ಲ. ವಿವರ ಅನುಬಂಧ-2 ರಲ್ಲಿ ನೀಡಲಾಗಿದೆ.

ಇ) ಸರ್ಕಾರದ ಮುಂದೆ ಯಾವುದೇ ಗ್ರಾಮದಲ್ಲಿ ಹೊಸ ಪಶುಆಸ್ಪತ್ರೆಗಳಾಗಲೀ, ಪಶುಚಿಕಿತ್ಸಾಲಯಗಳಾಗಲೀ ಪ್ರಾರಂಭಿಸುವ ಪ್ರಸ್ತಾವನೆ ಇರಲಿಲ್ಲ. ಪ್ರಸ್ತುತ ಸಾಲಿನಲ್ಲಿ ಸರ್ಕಾರದ ಮುಂದೆ ರಾಜ್ಯದಲ್ಲಿ 200 ಪ್ರಾಥಮಿಕ ಪಶುಚಿಕಿತ್ಸಾಲಯಗಳನ್ನು ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಮಾತ್ರ ಇದೆ. ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರದಿಂದ ಪಶು ಚಿಕಿತ್ಸಾಲಯಗಳನ್ನಾಗಿ ಮೇಲ್ದರ್ಜೆಗೇರಿಸುವ ಸಂಸ್ಥೆಗಳ ಪಟ್ಟಿಯನ್ನು ಸದ್ಯದಲ್ಲಿಯೇ ಅಂತಿಮಗೊಳಿಸಲಾಗುವುದು.

ಈ) ಹೌದು, ಪಶುವೈದ್ಯರ ಹಾಗೂ ಸಹಾಯಕ ಸಿಬ್ಬಂದಿ ಕೊರತೆ ಇದೆ. ಜಿಲ್ಲೆಯ ಮಾಹಿತಿ ಅನುಬಂಧ-3 ರಲ್ಲಿ ನೀಡಲಾಗಿದೆ.

ಉ) ಸರ್ಕಾರವು ಕಾಲಕಾಲಕ್ಕೆ ಖಾಲಿ ಹುದ್ದೆಗಳನ್ನು ಮುಂಬಡ್ತಿಯಿಂದ ಮತ್ತು ನೇರ ನೇಮಕಾತಿಯಿಂದ ತುಂಬಲಾಗುತ್ತದೆ.

ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿನಿಲಯಗಳ ನಿರ್ವಹಣೆ

1145 (1489) ಶ್ರೀ ರಾಜೇಂದ್ರ ವರ್ಮ (ಹುಲ್‌ಸೂರ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯು ಯಾವ ಯಾವ ವರ್ಗಗಳ ವಿದ್ಯಾರ್ಥಿನಿಲಯಗಳನ್ನು ನಿರ್ವಹಣೆ ಮಾಡುತ್ತಿದೆ. ಕಳೆದ 3 ವರ್ಷಗಳಲ್ಲಿ ಇವುಗಳ ನಿರ್ವಹಣೆಗಾಗಿ ಪ್ರತಿ ವರ್ಷ ವೆಚ್ಚ ಮಾಡಲಾದ ಹಣದ ಮೊತ್ತವೆಷ್ಟು ; (ವಿಧಾನಸಭಾ ಕ್ಷೇತ್ರಾವಾರು ವಿವರ ಒದಗಿಸುವುದು) ಮತ್ತು ಇದೇ ಅವಧಿಯಲ್ಲಿ ಜಿಲ್ಲೆಯಲ್ಲಿ ಇಲಾಖೆಯಿಂದ ಯಾವ ಗ್ರಾಮಗಳಲ್ಲಿ ಯಾವ ವರ್ಗದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿತ್ತು ; ಇವುಗಳ ಪೈಕಿ ಯಾವ ಸ್ಥಳಗಳಲ್ಲಿ ಯಾವ ವರ್ಗದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿದೆ ?

ಆ) ಜಿಲ್ಲೆಯಲ್ಲಿ ಇಲಾಖೆಯಿಂದ ನಡೆಸಲ್ಪಡುತ್ತಿರುವ ವಿವಿಧ ವರ್ಗಗಳ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಕಳಪೆ ದರ್ಜೆಯ ಆಹಾರ ಮತ್ತು ಮೂಲಭೂತ